ಮೈಸೂರಿನ ಕೃಷ್ಣರಾಜೇಂದ್ರ ಆಸ್ಪತ್ರೆ ಕುರಿತು

2188 - ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ಕೃಷ್ಣರಾಜೇಂದ್ರ ಆಸ್ಪತ್ರೆ ಆವರಣದಲ್ಲಿ ಪೂರ್ಣಗೊಂಡಿರುವ ಒಂದು ಹೊಸ ಕಟ್ಟಡವನ್ನು ಉದ್ಘಾಟಿಸದೇ ಇರುವುದಕ್ಕೆ ಕಾರಣಗಳೇನು? ಆ ಸದರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸ್ಥಳಾವಕಾಶದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಹೊಸ ಕಟ್ಟಡ ನಿರ್ಮಾಣ ಕಾರ್ಯದಲ್ಲಿ ಆಗಿರುವ ನ್ಯೂನತೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಕೃಷ್ಣರಾಜೇಂದ್ರ ಆಸ್ಪತ್ರೆಯಲ್ಲಿ ಹಲವು ದರ್ಜೆಯ ಹುದ್ದೆಗಳು ಖಾಲಿ ಇದ್ದು, ಆ ಹುದ್ದೆಗಳಿಗೆ ನೇಮಕಾತಿ ಮಾಡದಿರಲು ಕಾರಣಗಳೇನು?

ಈ) ಹಾಗಿದ್ದಲ್ಲಿ ಈ ಮೇಲ್ಕಂಡ ನ್ಯೂನತೆ ಹಾಗೂ ನೇಮಕಾತಿ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಈ ಕಟ್ಟಡಕ್ಕೆ ಕೆಲವು ಹೆಚ್ಚಿನ ಅಗತ್ಯ ಕಾಮಗಾರಿ ಕೆಲಸಗಳು ಆಗಬೇಕಾಗಿದ್ದು ಮತ್ತು ಅತ್ಯಂತ ಕನಿಷ್ಠ ಅವಶ್ಯಕತೆಯ ಸಾಧನ ಸಲಕರಣೆಗಳು ಹಾಗೂ ಅಗತ್ಯ ಸಿಬ್ಬಂದಿ ವರ್ಗ ಬೇಕಾಗಿರುವುದರಿಂದ ಹೊಸ ಕಟ್ಟಡದ ಉದ್ಘಾಟನೆಗೆ ವಿಳಂಬವಾಗಿದೆ. ಸ್ಥಳಾವಕಾಶದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಬಂದಿದೆ.

ಇ) ಖಾಲಿ ಇರುವ ಎ, ಬಿ, ಮತ್ತು ಸಿ ವೃಂದದ ಹುದ್ದೆಗಳನ್ನು ಬಡ್ತಿ ಮತ್ತು ವರ್ಗಾವಣೆಯಿಂದ ತುಂಬಬೇಕಾಗಿದ್ದು ಆಡಳಿತಾತ್ಮಕ ಕಾರಣಗಳಿಗಾಗಿ ತಡವಾಗಿದೆ.

ಈ) ಸ್ಥಳಾವಕಾಶದ ಕೊರತೆ ನಿವಾರಿಸಲು ಮುಖ್ಯ ಇಂಜಿನಿಯರ್, ಕಟ್ಟಡಗಳ ವಿಭಾಗ ಇವರ ನಿರ್ದೇಶನದ ಮೇರೆಗೆ ಕಟ್ಟಡವನ್ನು ವಶಕ್ಕೆ ತೆಗೆದುಕೊಂಡು ಕಟ್ಟಡದ ಪೂರ್ವಭಾಗವನ್ನು ವೈದ್ಯಕೀಯ ವಿಭಾಗಕ್ಕೆ ನೀಡಲಾಗಿದೆ. ಇದರಲ್ಲಿ ಈ ವಿಭಾಗದ ಒಳರೋಗಿಗಳಿಗೆ ಚಿಕಿತ್ಸೆ ನಡೆಸಲಾಗುತ್ತಿದೆ. ಖಾಲಿ ಇರುವ ಹುದ್ದೆಗಳ ಭರ್ತಿಗೆ ವಿವಿಧ ಹಂತದಲ್ಲಿ ಕ್ರಮ ಜರುಗಿಸಲಾಗುತ್ತಿದೆ.

ಸಾರ್ವಜನಿಕ ಗ್ರಂಥಾಲಯಗಳ ಸಂಖ್ಯೆ

2189 - ಶ್ರೀ ಕೆ. ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?